ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಕೋ-ಆಪರೇಟಿವ್ ಬ್ಯಾಂಕಿನ ಸ್ಥಿರತೆಯ ಬಗ್ಗೆ

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):-

217 (197) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿನ ಶ್ರೀ ಗುರು ರಾಘವೇಂದ್ರ ಕೋ-ಆಪರೇಟಿವ್ ಬ್ಯಾಂಕ್‌ನಲ್ಲಿ ಇತ್ತೀಚೆಗೆ ನಡೆದ ಹಗರಣ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹಗರಣದ ಸಂಕ್ಷಿಪ್ತ ಮಾಹಿತಿ ನೀಡುವುದು ;

(ಆ) ಈ ಬ್ಯಾಂಕ್‌ನಲ್ಲಿ ಖಾತೆ ಹೊಂದಿರುವ ಎಷ್ಟು ಗ್ರಾಹಕರಿಗೆ ತೊಂದರೆ ಆಗಿದೆ ; (ಮಾಹಿತಿ ನೀಡುವುದು)

(ಇ) ಇಂತಹ ಬ್ಯಾಂಕ್ ಹಗರಣಗಳನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಸಹಕಾರ ಬ್ಯಾಂಕ್‌ಗಳ ನಿಯಂತ್ರಣದಲ್ಲಿ ಆರ್.ಬಿ.ಐ. ಮತ್ತು ರಾಜ್ಯ ಸರ್ಕಾರದ ಸಹಕಾರ ಇಲಾಖೆಯಲ್ಲಿನ ದ್ವಿನೀತಿಯ ನಿಯಮಗಳಿಂದ ತೊಂದರೆಯಾಗುತ್ತಿರುವ ವಿಷಯದ ಬಗ್ಗೆ ಸರ್ಕಾರದ ನಿಲುವೇನು ? (ಸ್ಪಷ್ಟ ಮಾಹಿತಿ ನೀಡುವುದು)